**ಕರ್ನಾಟಕ ವಿಧಾನ ಪರಿಷತ್ತು**
**ನೂರ ಮೂವತ್ತನೆಯ ಅಧಿವೇಶನ**
**(ಮುಂದುವರೆದ ಉಪವೇಶನಗಳು)**
**ಕಾರ್ಯಕಲಾಪಗಳ ಪಟ್ಟಿ**
**ಸೋಮವಾರ, ದಿನಾಂಕ: 18ನೇ ಜುಲೈ, 2016**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

**01. ನಿಯಮ 68ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ**

**ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಸದಸ್ಯರುಗಳಾದ: ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಬಸವರಾಜ ಹೊರಟ್ಟಿ, ಟಿ.ಎ. ಶರವಣ ಹಾಗೂ ಇತರರುಗಳು** ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಮತ್ತು ಪೋಲೀಸ್ ವ್ಯವಸ್ಥೆ ಕುಸಿದಿದ್ದು, ಪ್ರಾಮಾಣಿಕ ಅಧಿಕಾರಿಗಳಿಗೆ ರಕ್ಷಣೆ ಇಲ್ಲದೆ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಹಾಗೂ ಸ್ವಯಂ ನಿವೃತ್ತಿಯಾಗುತ್ತಿರುವ ಪರಿಸ್ಥಿತಿ ಬಗ್ಗೆ ನಡೆದ ಚರ್ಚೆಯ ಮೇಲೆ ಸರ್ಕಾರದಿಂದ ಉತ್ತರ.

**02. ಪ್ರಶ್ನೋತ್ತರ**

| | |
|---|---|
| ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : ಇಪ್ಪತ್ತೆರಡನೆಯ ಪಟ್ಟಿ |
| ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : ಇಪ್ಪತ್ತೆರಡನೆಯ ಪಟ್ಟಿ |

**03. ವರದಿಗಳನ್ನೊಪ್ಪಿಸುವುದು**

**ಅ) ಶ್ರೀ ಮರಿತಿಬ್ಬೇಗೌಡ (ಮಾನ್ಯ ಉಪಸಭಾಪತಿಗಳು ಹಾಗೂ ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ)** ಅವರು ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೂರನೆಯ ವರದಿಯನ್ನು ಒಪ್ಪಿಸುವುದು.

**ಆ) ಶ್ರೀ ಎಸ್.ವ್ಹಿ.ಸಂಕನೂರ, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ)** ಅವರು 2015-16ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮೂವತ್ತೊಂದನೆಯ ವರದಿಯನ್ನು ಒಪ್ಪಿಸುವುದು.

**ಇ) ಶ್ರೀ ಮಾನೆ ಶ್ರೀನಿವಾಸ್, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ)** ಅವರು 2015-16ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 14, 15, 16, 17, 18 ಹಾಗೂ 19ನೇ ವರದಿಗಳನ್ನು ಒಪ್ಪಿಸುವುದು.

## ೦4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು ;-**

ಕರ್ನಾಟಕ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸುವುದು.

೦1. ಕರ್ನಾಟಕ ಅರಣ್ಯ (ತಿದ್ದುಪಡಿ) ವಿಧೇಯಕ, 2016

೦2. ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕ, 2016

೦3. ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ, 2016

೦4. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 2016

೦5. ಕರ್ನಾಟಕ ಗೃಹ ನಿರ್ಮಾಣ ಮಂಡಲಿ (ತಿದ್ದುಪಡಿ) ವಿಧೇಯಕ, 2016

## ೦5.ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

01. **ಕರ್ನಾಟಕ ಅರಣ್ಯ (ತಿದ್ದುಪಡಿ) ವಿಧೇಯಕ, 2016**

**ಶ್ರೀ ಬಿ.ರಮಾನಾಥ ರೈ** (ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಅರಣ್ಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. **ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕ, 2016**

**ಡಾ: ಜಿ.ಪರಮೇಶ್ವರ** (ಮಾನ್ಯ ಗೃಹ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..3

03. **ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ, 2016**

**ಶ್ರೀ ಹೆಚ್.ಎಸ್.ಮಹದೇವ ಪ್ರಸಾದ್** (ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. **ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 2016**

**ಶ್ರೀ ಎಸ್.ಎಸ್.ಮಲ್ಲಿಕಾರ್ಜುನ** (ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. **ಕರ್ನಾಟಕ ಗೃಹ ನಿರ್ಮಾಣ ಮಂಡಲಿ (ತಿದ್ದುಪಡಿ) ವಿಧೇಯಕ, 2016**

**ಶ್ರೀ ಸಿದ್ದರಾಮಯ್ಯ** (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಗೃಹ ನಿರ್ಮಾಣ ಮಂಡಲಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಉಡುಪಿ ಮತ್ತು ಕುಂದಾಪುರ ತಾಲ್ಲೂಕುಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು ವರಾಹಿ ನೀರಾವರಿ ಯೋಜನೆಯ ಕಾಲುವೆಯನ್ನು ಉಡುಪಿ ತಾಲ್ಲೂಕಿನ ಹೆಜಮಾಡಿಯವರೆಗೂ ಮುಂದುವರೆಸಿ, ಕೆರೆಗಳನ್ನು ತುಂಬಿಸುವ ಯೋಜನೆ ಬಗ್ಗೆ **ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಐವನ್ ಡಿ'ಸೋಜಾ (ಸರ್ಕಾರಿ ಮುಖ್ಯ ಸಚೇತಕರು)** ಅವರು ಅಂತರ್ಜಲ ಕುಸಿತದಿಂದಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೀರಿನ ಅಭಾವ ಉಂಟಾಗಿರುವುದರಿಂದ ಅಂತರ್ಜಲ ವೃದ್ಧಿಸಲು ಇಲಾಖೆಯ ಮುಂದಿರುವ ಯೋಜನೆಗಳ ಬಗ್ಗೆ **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ** ಗಮನ ಸೆಳೆಯುವುದು.

..4

## 07. ನಿಯಮ 330ರ ಮೇರೆಗೆ

**ಅ) ಶ್ರೀ ರಾಮಚಂದ್ರಗೌಡ** ಅವರು ಬೆಂಗಳೂರು ನಗರದ ಕೆಲವು ಕೆರೆಗಳಲ್ಲಿ ವಿಷಯುಕ್ತ ಹಾಗೂ ಹಾನಿಕಾರಕವಾದ ನೊರೆ ಸಮಸ್ಯೆಯಿಂದಾಗಿ ಲಕ್ಷಾಂತರ ಮೀನುಗಳು ಸಾವನ್ನಪ್ಪಿದ್ದು ಹಾಗೂ ಕೆರೆಗಳ ಸುತ್ತಮುತ್ತಲಿನ ಸಾರ್ವಜನಿಕರ ಆರೋಗ್ಯಕ್ಕೆ ದುಷ್ಪರಿಣಾಮವುಂಟಾಗುತ್ತಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು)**

**ಆ) ಶ್ರೀ ಪುಟ್ಟಣ್ಣ** ಅವರು ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ 1993-94 ಮತ್ತು 1994-95ರಲ್ಲಿ ಸೇವೆ ಸಲ್ಲಿಸಿ, ಶೇ 55% ಕ್ಕಿಂತ ಕಡಿಮೆ ಅಂಕ ಪಡೆದ ಅರೆಕಾಲಿಕ ಉಪನ್ಯಾಸಕರಗಳ ಸೇವಾ ಸಕ್ರಮಾತಿ ಮಾಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

**ಶ್ರೀನಿವಾಸ**
**ಕಾರ್ಯದರ್ಶಿ(ಪ್ರ)**

---